**All India Radio: Bangalore**
**National Bulletin In Kannada**
**28.06.2026 19.35 hrs**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**28.06.2026 19.35 hrs**

---

ಮುಖ್ಯಾಂಶಗಳು

೧. ಭಾರತ-ಸೆಶೆಲ್ ನಡುವೆ ಬಾಂಧವ್ಯ ವೃದ್ಧಿಪಡಿಸುವ ವಿವಿಧ ಒಪ್ಪಂದಗಳಿಗೆ ಇಂದು ಅಂಕಿತ; ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸೆಶೆಲ್‌ನ ಅತ್ಯುನ್ನತ ಪರಿಸರ ನಾಯಕತ್ವ ಪ್ರಶಸ್ತಿ ಗಾರ್ಡಿಯನ್ ಆಫ್ ದ ಬ್ಲೂ ಹೊರೈಜನ್ ಪ್ರದಾನ

೨. ಪ್ರಾಚೀನ ಸಂಪ್ರದಾಯವನ್ನು ಆಧುನಿಕ ಕಾಲದೊಂದಿಗೆ ಸಂಪರ್ಕಿಸುವ ಉಪಕ್ರಮಗಳನ್ನು ಆರಂಭಿಸಲು ವಿಶ್ವವಿದ್ಯಾಲಯಗಳಿಗೆ ಪ್ರಧಾನಿ ಮನ್ ಕಿ ಬಾತ್‌ನಲ್ಲಿ ಮನವಿ

೩. ಆರೋಗ್ಯಕರ ಮತ್ತು ವ್ಯಸನ ಮುಕ್ತ ರಾಷ್ಟ್ರ ನಿರ್ಮಾಣಕ್ಕೆ ಕೊಡುಗೆ ನೀಡಲು ಯುವ ಜನತೆಗೆ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಕರೆ

೪. ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್; ಆಸ್ಟ್ರೇಲಿಯಾ ವಿರುದ್ಧ ಟಾಸ್ ಗೆದ್ದ ಭಾರತ ತಂಡ ಬ್ಯಾಟಿಂಗ್ ಆಯ್ಕೆ

---

ಪ್ರಧಾನಿ ನರೇಂದ್ರ ಮೋದಿ ಹಾಗೂ ಸೆಶೆಲ್ ಅಧ್ಯಕ್ಷ ಪ್ಯಾಟ್ರಿಕ್ ಹರ್ಮಿನ್ ಸಮ್ಮುಖದಲ್ಲಿ ಇಂದು ಕೃಷಿ, ಹಣಕಾಸು, ಬಾಹ್ಯಕಾಶ ಹಾಗೂ ಆರೋಗ್ಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಹಕಾರ ಬಲವರ್ಧನೆಗಾಗಿ ಒಪ್ಪಂದಗಳನ್ನು ಮಾಡಿಕೊಳ್ಳಲಾಗಿದೆ.

ಸೆಶೆಲ್ ಭೇಟಿಯಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು, ಅಲ್ಲಿನ ಅಧ್ಯಕ್ಷ ಪ್ಯಾಟ್ರಿಕ್ ಹರ್ಮಿನ್ ಅವರೊಂದಿಗೆ ವಿಕ್ಟೋರಿಯಾದಲ್ಲಿ ಪರಸ್ಪರ ಹಿತಾಸಕ್ತಿಯ ವಿಚಾರ ಹಾಗೂ ಅಂತಾರಾಷ್ಟ್ರೀಯ ವಿಷಯಗಳ ಬಗ್ಗೆ ವಿಚಾರ ವಿನಿಮಯ ನಡೆಸಿದರು.

ಇದೇ ಸಂದರ್ಭದಲ್ಲಿ ಸೆಶೆಲ್ ಅಧ್ಯಕ್ಷ ಪ್ಯಾಟ್ರಿಕ್ ಹರ್ಮಿನ್, ಪ್ರಧಾನಿ ನರೇಂದ್ರ ಮೋದಿ ಅವರಿಗೆ ಗಾರ್ಡಿಯನ್ ಆಫ್ ದ ಬ್ಲೂ ಹೊರೈಸನ್ ಪುರಸ್ಕಾರ ನೀಡಿ ಸನ್ಮಾನಿಸಿದರು. ಪರಿಸರ ನಾಯಕತ್ವಕ್ಕಾಗಿ ನೀಡಲಾಗುವ ಅತ್ಯುನ್ನತ ಗೌರವ ಇದಾಗಿದೆ. ಸುಸ್ಥಿರ ಅಭಿವೃದ್ಧಿ ಹಾಗೂ ಹಸಿರು ಬೆಳವಣಿಗಾಗಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಇರುವ ಬದ್ಧತೆ ಗುರುತಿಸಿ ಈ ಮನ್ನಣೆ ನೀಡಲಾಗಿದೆ.

ನಂತರ ನಡೆದ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಈ ಮನ್ನಣೆ ಭಾರತದ ನಾಗರಿಕರಿಗೆ ಸಂದ ಗೌರವವಾಗಿದೆ ಎಂದರು.

ಭವಿಷ್ಯ ಸಿದ್ಧ, ಸದೃಢ ಆರ್ಥಿಕ ಸಹಕಾರದ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಉಭಯ ದೇಶಗಳು ಹೊಸ ಕ್ಷೇತ್ರಗಳಲ್ಲಿನ ಸಹಕಾರಕ್ಕಾಗಿ ಪರಿಶೋಧನೆ ನಡೆಸಲಿವೆ. ಭಾರತ-ಸೆಶೆಲ್ ನಡುವಿನ ಸಂಪರ್ಕ ಹೆಚ್ಚಿಸಲು ಎಲ್ಲ ಕ್ರಮ ಕೈಗೊಳ್ಳಲಾಗುವುದು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಉಭಯ ದೇಶಗಳ ನಡುವಿನ ಸಂಪರ್ಕವನ್ನು ಉತ್ತಮ ಪಡಿಸಲು ಡಿಜಿಟಲ್ ತಂತ್ರಜ್ಞಾನ ಪರಿಣಾಮಕಾರಿಯಾಗಿದೆ. ಡಿಜಿಟಲ್ ಸಾರ್ವಜನಿಕ ಕ್ಷೇತ್ರದಲ್ಲಿ ಇರುವ ಭಾರತದ ಯಶಸ್ವಿ ಅನುಭವವನ್ನು ಸೆಶೆಲ್‌ನೊಂದಿಗೆ ಹಂಚಿಕೊಳ್ಳಲಾಗುವುದು ಎಂದರು.

ಸೆಶೆಲ್‌ನಲ್ಲಿ ಯುಪಿಐ ಅನುಷ್ಠಾನಗೊಳಿಸಲು ತಿಳಿವಳಿಕೆ ಪತ್ರಕ್ಕೆ ಸಹಿ ಹಾಕಿರುವ ಬಗ್ಗೆ ಪ್ರಧಾನಿ ಸಂತಸ ವ್ಯಕ್ತಪಡಿಸಿದರು. ಕೋವಿಡ್ ಸಾಂಕ್ರಾಮಿಕ ಸಂದರ್ಭದಲ್ಲಿ ಲಸಿಕೆಯನ್ನು ಪೂರೈಸುವ ಮೂಲಕ ಭಾರತ ತನ್ನ ಸ್ನೇಹದ ಪಾತ್ರವನ್ನು ಪ್ರದರ್ಶಿಸಿದೆ. ಜನೌಷಧಿಗೆ ಸಂಬಂಧಿಸಿದಂತೆ ಮಾಡಿಕೊಂಡ ಒಪ್ಪಂದ, ಸೆಶೆಲ್ ಜನತೆಗೆ ಗುಣಮಟ್ಟದ ಹಾಗೂ ಕೈಗೆಟಕುವ ದರದಲ್ಲಿ ಔಷಧಿ ದೊರಕಲು ನೆರವಾಗಲಿದೆ ಎಂದರು.

ಸೆಶೆಲ್ ಅಧ್ಯಕ್ಷ ಪ್ಯಾಟ್ರಿಕ್ ಹರ್ಮಿನ್ ಜಂಟಿ ಸುದ್ದಿ ಹೇಳಿಕೆಯಲ್ಲಿ, ಭಾರತದೊಂದಿಗೆ ಪರಸ್ಪರ ನಂಬಿಕೆಯ ಹಾಗೂ ಗಹನವಾದ ಸ್ನೇಹ-ಸಂಬಂಧ ಹೊಂದುವುದನ್ನು ಸೆಶೆಲ್ ಎದುರು ನೋಡುತ್ತಿದೆ ಎಂದು ಹೇಳಿದ್ದಾರೆ. ರಾಜ ತಾಂತ್ರಿಕ ಸಂಬಂಧದ ೫೦ನೇ ವರ್ಷದ ಈ ಸಂದರ್ಭದಲ್ಲಿ ಉಭಯ ದೇಶಗಳು ಭೌಗೋಳಿಕ, ಐತಿಹಾಸಿಕ ಹಾಗೂ ಹಿಂದೂಮಹಾಸಾಗರ ವಲಯದಲ್ಲಿ ಸಮೃದ್ಧಿ ಮತ್ತು ಸ್ಥಿರತೆಯ ದೃಷ್ಟಿಯನ್ನು ಬಲಪಡಿಸುವ ಬದ್ಧತೆಯನ್ನು ವ್ಯಕ್ತಪಡಿಸಿರುವುದಾಗಿ ಪ್ಯಾಟ್ರಿಕ್ ಹರ್ಮಿನ್ ಹೇಳಿದ್ದಾರೆ.

ನಂತರ ಪ್ರಧಾನಿ ನರೇಂದ್ರ ಮೋದಿ ಸೆಶೆಲ್‌ನ ರಾಷ್ಟ್ರೀಯ ಅಸೆಂಬ್ಲಿಯನ್ನು ಉದ್ದೇಶಿಸಿ ಮಾತನಾಡಿ, ಹವಾಮಾನ ಹಾಗೂ ಪರಿಸರ ಸಂರಕ್ಷಣೆಯ ಉಪಕ್ರಮಗಳು ನ್ಯಾಯಯುತ, ಜವಾಬ್ದಾರಿಯುತ ಹಾಗೂ ಪಾಲುದಾರಿಕೆಯ ಅಂಶಗಳಿಂದ ನಿರ್ದೇಶಿತವಾಗಿರಬೇಕು; ಇದು ಹವಾಮಾನ ನ್ಯಾಯದ ಸಾರವಾಗಿದೆ ಎಂದರು.

ಅಭಿವೃದ್ಧಿ ಎಲ್ಲರನ್ನೂ ಒಳಗೊಂಡಿರಬೇಕು ಎನ್ನುವುದು ಭಾರತ ಮತ್ತು ಸೆಶೆಲ್‌ನ ಆಶಯವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

---

ಲೋಕಸಭಾಧ್ಯಕ್ಷ ಓಂ ಬಿರ್ಲಾ, ಕೇಂದ್ರ ಗೃಹ ಸಚಿವ ಅಮಿತ್ ಶಾ, ವಿದೇಶಾಂಗ ವ್ಯವಹಾರಗಳ ಖಾತೆ ಸಚಿವ ಡಾ.ಎಸ್.ಜೈಶಂಕರ್, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಪರಿಸರ ಸಂರಕ್ಷಣೆ ಮತ್ತು ಸುಸ್ಥಿರ ಅಭಿವೃದ್ಧಿ ನಾಯಕತ್ವಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸೆಶೆಲ್‌ನ ಅತ್ಯುನ್ನತ ಗೌರವ ದೊರೆತ ಹಿನ್ನೆಲೆಯಲ್ಲಿ ಅಭಿನಂದಿಸಿದ್ದಾರೆ.

---

ಪ್ರಾಚೀನ ಸಂಪ್ರದಾಯವನ್ನು ಆಧುನಿಕ ಕಾಲದೊಂದಿಗೆ ಸಂಪರ್ಕಿಸುವ ಉಪಕ್ರಮಗಳನ್ನು ಆರಂಭಿಸಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ವಿಶ್ವವಿದ್ಯಾಲಯಗಳಿಗೆ ಮನವಿ ಮಾಡಿದ್ದಾರೆ.

ತಂತ್ರಜ್ಞಾನದ ಈ ಯುಗದಲ್ಲಿ ಪ್ರತಿ ದಿನ ಹೊಸದೊಂದು ಸಂಶೋಧನೆ ನಡೆಯುತ್ತಿದೆ. ಹೊಸ ಹೊಸ ಕೃತಕಬುದ್ಧಿಮತ್ತೆ ಆವಿಷ್ಕಾರಗಳು ಹೊರಹೊಮ್ಮುತ್ತಿವೆ. ಈ ಸಂದರ್ಭದಲ್ಲಿ ಜನರ

ಸೃಜನಾತ್ಮಕತೆಯನ್ನು ರಕ್ಷಿಸುವ ಬಗ್ಗೆ ಕ್ರಮ ಕೈಗೊಳ್ಳಬೇಕಾಗಿದೆ. ಈ ನಿಟ್ಟಿನಲ್ಲಿ ನಳಂದ ವಿಶ್ವವಿದ್ಯಾಲಯ ಪ್ರಾಚೀನ ಸಂಪ್ರದಾಯವನ್ನು ಪುನರುಜ್ಜೀವನಗೊಳಿಸಿದೆ ಎಂದು ಪ್ರಧಾನಿ ಇಂದು ಪ್ರಸಾರವಾದ ಮನ್ ಕಿ ಬಾತ್‌ನಲ್ಲಿ ತಿಳಿಸಿದ್ದಾರೆ.

ದೆಹಲಿಯಲ್ಲಿರುವ ಕೇಂದ್ರೀಯ ಸಂಸ್ಕೃತ ವಿಶ್ವವಿದ್ಯಾಲಯ, ಕೃತಕಬುದ್ಧಿಮತ್ತೆ ಮತ್ತು ದತ್ತಾಂಶ ವಿಜ್ಞಾನದಲ್ಲಿ ಬಿ ಟೆಕ್ ಕಾರ್ಯಕ್ರಮ ಆರಂಭಿಸಿದ್ದು, ಇದು ಆಧುನಿಕ ತಂತ್ರಜ್ಞಾನವನ್ನು ಭಾರತದ ಸಾಂಪ್ರದಾಯಿಕ ಜ್ಞಾನದೊಂದಿಗೆ ಸಂಯೋಜಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ ಎಂದು ಅವರು ಹೇಳಿದ್ದಾರೆ.

ದೇಶದ ವಿಮಾನಯಾನ ಕ್ಷೇತ್ರ ಈ ತಿಂಗಳು ಒಂದು ಮಹತ್ವದ ಸಾಧನೆ ದಾಖಲಿಸಿದೆ. ಸಿ-೨೯೫ ವಿಮಾನ ಭಾರತದಲ್ಲೇ ನಿರ್ಮಾಣಗೊಂಡಿದ್ದು, ತನ್ನ ಮೊದಲ ಹಾರಾಟವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ; ಇಂತಹ ೪೦ ವಿಮಾನಗಳನ್ನು ಭಾರತದಲ್ಲೇ ನಿರ್ಮಿಸಲಾಗುತ್ತಿದೆ.

ಇದರಿಂದ ಅತಿ ಸಣ್ಣ, ಸಣ್ಣ ಹಾಗೂ ಮಧ್ಯಮ ಗಾತ್ರದ ಉದ್ದಿಮೆಗಳಿಗೆ ಉತ್ತೇಜನ ದೊರೆಯುತ್ತಿದೆ; ಉದ್ಯೋಗವಕಾಶಗಳು ಹೆಚ್ಚುತ್ತಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಮಾಹಿತಿ ನೀಡಿದ್ದಾರೆ.

ರಕ್ಷಣಾ ಸಂಶೋಧನಾ ಅಭಿವೃದ್ಧಿ ಸಂಸ್ಥೆ-ಡಿಆರ್‌ಡಿಓ, ಭಾರತೀಯ ಕೈಗಾರಿಕಾ ಪಾಲುದಾರರೊಂದಿಗೆ ಜಂಟಿಯಾಗಿ ಅಭಿವೃದ್ಧಿಪಡಿಸಿರುವ ದೀರ್ಘ ವ್ಯಾಪ್ತಿಯ ಲ್ಯಾಂಡ್ ಆಟ್ಯಾಕ್ ಕ್ರೂಸ್ ಕ್ಷಿಪಣಿಯ ಯಶಸ್ವಿ ಪರೀಕ್ಷೆಯನ್ನು ನಡೆಸಲಾಗಿದೆ. ಇಂದು ಸಮುದ್ರದಿಂದ ಹಿಡಿದು ಆಕಾಶದವರೆಗೆ ಭಾರತ, ಅಧಿಕ ಸುರಕ್ಷಿತ ಹಾಗೂ ಆತ್ಮನಿರ್ಭರವಾಗುತ್ತಿದೆ ಎಂದು ಪ್ರಧಾನಿ ಅವರು ತಮ್ಮ ೧೩೫ನೇ ಮನದ ಮಾತಿನ ಸಂಚಿಕೆಯಲ್ಲಿ ತಿಳಿಸಿದ್ದಾರೆ

---

ಇಂದಿನ ಯುವ ಪೀಳಿಗೆ ಆರೋಗ್ಯಕರ ಮತ್ತು ವ್ಯಸನ ಮುಕ್ತ ರಾಷ್ಟ್ರವನ್ನು ನಿರ್ಮಿಸುವತ್ತ ಕಾರ್ಯಪ್ರವೃತ್ತವಾಗಬೇಕು ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಕರೆ ನೀಡಿದ್ದಾರೆ.

ಅವರು ಬೆಂಗಳೂರಿನಲ್ಲಿಂದು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸಂಸ್ಥಾಪನಾ ದಿನಾಚರಣೆ ಮತ್ತು ನಶೆ ಮುಕ್ತ ಭಾರತ್ ಅಭಿಯಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಸಮಾಜ ಮತ್ತು ರಾಷ್ಟ್ರಕ್ಕೆ ಉತ್ತಮ ಭವಿಷ್ಯವನ್ನು ಸೃಷ್ಟಿಸಲು ಅರಿವು, ಜವಾಬ್ದಾರಿ ಮತ್ತು ಸಾಮೂಹಿಕ ಪ್ರಯತ್ನ ಅತ್ಯಗತ್ಯ ಎಂದು ಈ ಸಂದರ್ಭದಲ್ಲಿ ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಮಾದಕ ವಸ್ತು ವ್ಯಸನ ಮುಕ್ತ ರಾಷ್ಟ್ರಕ್ಕಾಗಿ ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

---

ಗ್ರಾಮೀಣ ಜೀವನೋಪಾಯ ಅಭಿಯಾನದಡಿ ೧೦ ಕೋಟಿಗೂ ಅಧಿಕ ಮಹಿಳೆಯರು ಸ್ವಸಹಾಯ ಗುಂಪುಗಳೊಂದಿಗೆ ಸಂಪರ್ಕ ಹೊಂದಿದ್ದು, ಇದು ಮಹಿಳಾ ನೇತೃತ್ವದ ಅಭಿವೃದ್ಧಿ ಹಾಗೂ ಗ್ರಾಮೀಣ ಉದ್ಯಮಶೀಲತೆಯನ್ನು ಬಲಪಡಿಸಿದೆ ಎಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಖಾತೆ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ.

ಅವರು ನವದೆಹಲಿಯಲ್ಲಿಂದು ರಾಷ್ಟ್ರೀಯ ಗ್ರಾಮೀಣ ವಿಕಾಸ ಸಮ್ಮೇಳನದಲ್ಲಿ ಮಾತನಾಡಿ, ಗ್ರಾಮ ಪಂಚಾಯಿತಿಗಳು ೨೦೪೭ರ ವೇಳೆಗೆ ದೇಶವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿಸಲು ಶ್ರಮಿಸಬೇಕು ಎಂದು ಕರೆ ನೀಡಿದರು. ವಿಕಸಿತ ಭಾರತ ಗ್ರಾಮೀಣ ಯೋಜನೆಯಡಿ ರಾಜ್ಯಗಳ ಕೊಡುಗೆ ಸೇರಿದಂತೆ ಒಂದು ಲಕ್ಷ ೫೧ ಸಾವಿರ ಕೋಟಿ ರೂಪಾಯಿಗೂ ಅಧಿಕ ಹಣ ನೀಡಿಕೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ಅವರು ಹೇಳಿದರು.

---

ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜಗತ್ ಪ್ರಕಾಶ್ ನಡ್ಡಾ ನಾಳೆ ನವದೆಹಲಿಯಲ್ಲಿ ನಡೆಯಲಿರುವ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕೇಂದ್ರೀಯ ಮಂಡಳಿಯ ೧೬ನೇ ಸಭೆಯಲ್ಲಿ ರಕ್ತಹೀನತೆ ಮುಕ್ತ ಭಾರತ ಅಭಿಯಾನದ ಕಾರ್ಯಾಚರಣೆ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಲಿದ್ದಾರೆ.

ಈ ಮಾರ್ಗಸೂಚಿ ಹಿಮೋಗ್ಲೊಬಿನ್ ಪರೀಕ್ಷೆ, ಕಬ್ಬಿಣಾಂಶ ಕೊರತೆಯಿಂದ ಉಂಟಾಗುವ ರಕ್ತಹೀನತೆಗೆ ಉಪಚಾರ, ವ್ಯವಸ್ಥಿತ ಆರೈಕೆ, ಆರೋಗ್ಯಕರ ಆಹಾರ ಅಭ್ಯಾಸ ಮೊದಲಾದವುಗಳಿಗೆ ಒತ್ತು ನೀಡಲಿದೆ.

---

ಲಂಡನ್‌ನ ಲಾರ್ಡ್ಸ್ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆದಿರುವ ಪಂದ್ಯದಲ್ಲಿ ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ 'ಎ' ಗಂಪಿನ ಪಂದ್ಯದಲ್ಲಿ ಭಾರತ, ಆಸ್ಟ್ರೇಲಿಯಾ ಮುಖಾಮುಖಿಯಾಗಿವೆ. ಟಾಸ್ ಗೆದ್ದಿರುವ ಭಾರತ ತಂಡ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ.

ಇತ್ತೀಚಿನ ವರದಿ ಬಂದಾಗ ಭಾರತ ೯ ಓವರ್‌ಗಳಲ್ಲಿ ಯಾವುದೇ ವಿಕೆಟ್ ಇಲ್ಲದೇ ೬೩ ರನ್ ಗಳಿಸಿ ಆಡುತ್ತಿದೆ.

__________ ಮುಕ್ತಾಯ _________